Akashvani: Bangalore
National Bulletin In Kannada
20.02.2026 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

20.02.2026 : 7.35AM

********

**ಮುಖ್ಯಾಂಶಗಳು :**

1. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ; ೫ನೇ ದಿನವಾದ ಇಂದು ನಾಯಕರ ಘೋಷಣಾ ಪತ್ರ ಅಂಗೀಕಾರದ ನಿರೀಕ್ಷೆ
2. ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಪೂರ್ವ ಸಿದ್ಧತೆ ಪೂರ್ಣಗೊಳಿಸುವಂತೆ ೨೨ ರಾಜ್ಯ, ಕೇಂದ್ರಾಡಳಿತ ಪ್ರದೇಶಗಳಿಗೆ ಚುನಾವಣಾ ಆಯೋಗ ನಿರ್ದೇಶನ
3. ಕೇಂದ್ರ ಸಚಿವ ಅಮಿತ್ ಶಾ ಅಸ್ಸಾಂ ಭೇಟಿ; ಕಚಾರ್‌ನಲ್ಲಿ ವೈಬ್ರೆಂಟ್ ವಿಲೇಜಸ್ ಕಾರ್ಯಕ್ರಮ-೨ಕ್ಕೆ ಚಾಲನೆ
4. ವಾಷಿಂಗ್ಟನ್ ಡಿಸಿಯಲ್ಲಿ ಮೊದಲ ಶಾಂತಿ ಮಂಡಳಿ ಸಭೆ ಸಂಪನ್ನ
5. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಡಿ ಗುಂಪಿನ ಪಂದ್ಯದಲ್ಲಿ ಕೆನಡಾ ವಿರುದ್ಧ ಅಫ್ಘಾನಿಸ್ತಾನಕ್ಕೆ ೮೨ ರನ್‌ಗಳ ಜಯ

**********

ನವದೆಹಲಿಯ ಭಾರತ ಮಂಟಪಂನಲ್ಲಿ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ಪ್ರಗತಿಯಲ್ಲಿದೆ ೫ನೇ ದಿನವಾದ ಇಂದು ಜಾಗತಿಕ ಕೃತಕ ಬುದ್ಧಿಮತ್ತೆ ಮತ್ತು ಸಹಯೋಗಕ್ಕಾಗಿ ಬದ್ಧತೆಗಳು ಮತ್ತು ಹಂಚಿಕೆಯ ಮಾರ್ಗಸೂಚಿಯನ್ನು ನಿರ್ಧರಿಸುವ ನಾಯಕರ ಘೋಷಣಾ ಪತ್ರವನ್ನು ಅಂಗೀಕರಿಸಲಾಗುವುದು. ಇದರ ಜೊತೆಗೆ ಉನ್ನತ ಮಟ್ಟದ ಜಿಪಿಎಐ ಸಮಿತಿ ಸಭೆಗಳು ನಡೆಯಲಿದೆ. ಈ ವೇಳೆ ಸದಸ್ಯ ರಾಷ್ಟ್ರಗಳು ಜವಾಬ್ದಾರಿಯುತ ಮತ್ತು ಒಳಗೊಳ್ಳುವ ಕೃತಕ ಬುದ್ಧಿಮತ್ತೆ ಕುರಿತಂತೆ ಬಹುಪಕ್ಷೀಯ ಸಹಕಾರವನ್ನು ಬಲಪಡಿಸುವ ದಿಸೆಯಲ್ಲಿ ಪ್ರಗತಿ ಪರಿಶೀಲನೆ ನಡೆಸಲಿವೆ. ಈ ಶೃಂಗಸಭೆಯನ್ನು ಪ್ರಧಾನಿ ನರೇಂದ್ರ ಮೋದಿ ನಿನ್ನೆ ಉದ್ಘಾಟಿಸಿ ಆಗಮಿಸಿದ

ಎಲ್ಲಾ ಜಾಗತಿಕ ನಾಯಕರನ್ನು ಸ್ವಾಗತಿಸಿದರು. ವಿಶ್ವದಾದ್ಯಂತ ಸುಮಾರು ೫೦೦ಕ್ಕೂ ಹೆಚ್ಚು ಎಐ ತಜ್ಞರು, ೧೦೦ಕ್ಕೂ ಹೆಚ್ಚು ಕಾರ್ಯ ನಿರ್ವಾಹಕ ಅಧಿಕಾರಿಗಳು ಮತ್ತು ೧೫೦ ಶಿಕ್ಷಣ ತಜ್ಞರು ಮತ್ತು ಸಂಶೋಧಕರು ಹಾಗೂ ಸುಮಾರು ೪೦೦ ಮುಖ್ಯ ತಾಂತ್ರಿಕ ಅಧಿಕಾರಿ - ಸಿಟಿಓಗಳು ಶೃಂಗಸಭೆಯಲ್ಲಿ ಭಾಗಿಯಾಗಿದ್ದಾರೆ. ಸಾರ್ವಜನಿಕರ ಭಾರೀ ಸ್ಪಂದನೆಯ ಹಿನ್ನೆಲೆಯಲ್ಲಿ ಎಐ ಎಕ್ಸ್‌ಪೋವನ್ನು ನಾಳೆ ರಾತ್ರಿ ೮ ಗಂಟೆವರೆಗೆ ವಿಸ್ತರಿಸಲಾಗಿದೆ.

**********

ಭಾರತ ಎಐ ಶೃಂಗಸಭೆಯ ಭಾಗವಾಗಿ ನವದೆಹಲಿಯಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಉದ್ಯಮ ನಾಯಕರೊಂದಿಗಿನ ದುಂಡುಮೇಜಿನ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಅವರು, ಈ ಸಭೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಮತ್ತು ನಾವೀನ್ಯತಾ ಕ್ಷೇತ್ರದ ಹಲವು ಪಾಲುದಾರರನ್ನು ಒಟ್ಟುಗೂಡಿಸಿತು. ಚರ್ಚೆಗಳು ಒಳನೋಟವುಳ್ಳ ಮತ್ತು ಭವಿಷ್ಯದ ದೃಷ್ಟಿಕೋನ ಹೊಂದಿದ್ದವು. ವಿಶೇಷವಾಗಿ ಎಐ ತಂತ್ರಜ್ಞಾನವನ್ನು ಜವಾಬ್ದಾರಿಯುತವಾಗಿ ವಿಸ್ತರಿಸುವುದು, ಜಾಗತಿಕ ಸಹಕಾರವನ್ನು ಬಲಪಡಿಸುವುದು ಹಾಗೂ ಆರ್ಥಿಕ ಬೆಳವಣಿಗೆಯ ಹೊಸ ಅವಕಾಶಗಳನ್ನು ಮುಕ್ತಗೊಳಿಸುವ ಬಗ್ಗೆ ಸಭೆಯಲ್ಲಿ ಗಂಭೀರ ಚರ್ಚೆ ನಡೆಸಲಾಗಿದೆ ಎಂದಿದ್ದಾರೆ. ಮಾನವ ಪ್ರಗತಿ ಮತ್ತು ಸುಸ್ಥಿರ ಅಭಿವೃದ್ಧಿಗಾಗಿ ಎಐ ಬಳಸುವ ಕುರಿತು ಉದ್ಯಮಿಗಳಲ್ಲಿರುವ ಬದ್ಧತೆಯನ್ನು ಕಂಡು ಪ್ರಧಾನಿ ಹರ್ಷ ವ್ಯಕ್ತಪಡಿಸಿದರು.

**********

ದೇಶದ ೨೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮುಂಬರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ಕೆ ಸಂಬಂಧಿಸಿದಂತೆ ಎಲ್ಲಾ ಪೂರ್ವ ಸಿದ್ಧತೆಗಳನ್ನು ತಕ್ಷಣವೇ ಪೂರ್ಣಗೊಳಿಸುವಂತೆ ಭಾರತೀಯ ಚುನಾವಣಾ ಆಯೋಗ ಆಯಾ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ನಿರ್ದೇಶನ ನೀಡಿದೆ. ವಿಶೇಷ ತೀವ್ರ ಪರಿಷ್ಕರಣೆ ಇದೇ ವರ್ಷದ ಏಪ್ರಿಲ್‌ನಲ್ಲಿ ಪ್ರಾರಂಭವಾಗಲಿರುವ ಹಿನ್ನೆಲೆ ಈ ೨೨ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳು ಎಲ್ಲಾ ಪೂರ್ವ ಸಿದ್ಧತೆಗಳನ್ನು ಪೂರ್ಣಗೊಳಿಸುವಂತೆ

ಆಯೋಗ ತಿಳಿಸಿದೆ. ಕರ್ನಾಟಕ ಸೇರಿದಂತೆ ಆಂಧ್ರಪ್ರದೇಶ, ಹರಿಯಾಣ, ಮಹಾರಾಷ್ಟ್ರ, ಪಂಜಾಬ್, ದೆಹಲಿ, ಜಮ್ಮು ಮತ್ತು ಕಾಶ್ಮೀರ ಹಾಗೂ ತೆಲಂಗಾಣ ಸೇರಿದಂತೆ ಒಟ್ಟು ೨೨ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಪ್ರಕ್ರಿಯೆ ನಡೆಯಲಿದೆ. ಪ್ರಸ್ತುತ ದೇಶದ ೧೨ ರಾಜ್ಯಗಳಲ್ಲಿ ಈ ರೀತಿಯ ಪರಿಷ್ಕರಣಾ ಕಾರ್ಯ ಪ್ರಗತಿಯಲ್ಲಿದೆ ಎಂದು ಆಯೋಗ ಮಾಹಿತಿ ನೀಡಿದೆ.

**********

ಅಸ್ಸಾಂನ ಕ್ಯಾಚರ್ ಜಿಲ್ಲೆಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ, ವೈಬ್ರೆಂಟ್ ವಿಲೇಜಸ್ ಕಾರ್ಯಕ್ರಮ - ೨ಕ್ಕೆ ಅಧಿಕೃತವಾಗಿ ಚಾಲನೆ ನೀಡಲಿದ್ದಾರೆ. ಈ ಕಾರ್ಯಕ್ರಮ ೨೦೪೭ರ ವಿಕಸಿತ ಭಾರತದ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಗಡಿ ಗ್ರಾಮಗಳ ಅಭಿವೃದ್ಧಿ ಸುಸ್ಥಿರ ಜೀವನೋಪಾಯಗಳನ್ನು ಸೃಜಿಸುವ ಮತ್ತು ಸುರಕ್ಷಿತ ಗಡಿ ಸಮುದಾಯಗಳನ್ನು ನಿರ್ಮಿಸುವ ಉದ್ದೇಶ ಹೊಂದಿದೆ. ಈ ಯೋಜನೆ ೨೦೨೮-೨೯ರ ವರೆಗೆ ೬ ಸಾವಿರದ ೮೦೦ ಕೋಟಿ ರೂಪಾಯಿಗೂ ಅಧಿಕ ವೆಚ್ಚದೊಂದಿಗೆ ಕಾರ್ಯಗತಗೊಳಿಸಲಾಗುತ್ತಿದೆ. ಈ ಯೋಜನೆಯನ್ನು ದೇಶದ ೧೫ ರಾಜ್ಯಗಳು ಮತ್ತು ೨ ಕೇಂದ್ರಾಡಳಿತ ಪ್ರದೇಶಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಗಡಿ ಗ್ರಾಮಗಳನ್ನು ಬಲಪಡಿಸುವ ಮೂಲಕ ಅಲ್ಲಿನ ನಿವಾಸಿಗಳು ರಾಷ್ಟ್ರದ ಕಣ್ಣು ಮತ್ತು ಕಿವಿಗಳಂತೆ ಕಾರ್ಯ ನಿರ್ವಹಿಸಲು ಸಾಧ್ಯವಾಗುತ್ತದೆ. ಆ ಮೂಲಕ ಗಡಿ ಭದ್ರತೆಯನ್ನು ಹೆಚ್ಚಿಸುವ ಜೊತೆಗೆ ಅಂತರ್ ಗಡಿ ಅಪರಾಧಗಳನ್ನು ತಡೆಗಟ್ಟುವ ಮತ್ತು ಆಂತರಿಕ ಭದ್ರತೆಯನ್ನು ಬಲಪಡಿಸುವತ್ತ ನೆರವಾಗುತ್ತದೆ. ತಮ್ಮ ಭೇಟಿಯ ಭಾಗವಾಗಿ ಕೇಂದ್ರ ಗೃಹ ಸಚಿವರು, ಭಾರತ - ಬಾಂಗ್ಲಾದೇಶ ಗಡಿಯಲ್ಲಿರುವ ಗಡಿ ರಕ್ಷಣಾ ಪಡೆಯ ನಟೂನ್‌ಪುರ್ ಔಟ್‌ಪೋಸ್ಟ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಸಚಿವರು ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಲಿದ್ದು, ಅಕ್ರಮ ನುಸುಳುವಿಕೆ ಮತ್ತು ಗಡಿ ಅಪರಾಧಗಳ ತಡೆಗೆ ಕೈಗೊಳ್ಳಲಾಗಿರುವ ಗಡಿ ಬೇಲಿ ಕಾರ್ಯಾಚರಣೆಯ ಪ್ರಗತಿ ಪರಿಶೀಲನೆ ನಡೆಸಲಿದ್ದಾರೆ. ಇದರ ಜೊತೆಗೆ ಸಚಿವರು ಬಿಜೆಪಿ ರ್‍ಯಾಲಿಯೊಂದನ್ನು ಉದ್ದೇಶಿಸಿ ಮಾತನಾಡಲಿದ್ದು, ಪಕ್ಷದ ಚುನಾವಣಾ ಪ್ರಚಾರಕ್ಕೆ ಬರಾಕ್ ಕಣಿವೆಯಲ್ಲಿ ಚಾಲನೆ ನೀಡಲಿದ್ದಾರೆ.

**********

ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿಂದು ೯ನೇ ಆವೃತ್ತಿಯ ಹಿಂದೂ ಮಹಾಸಾಗರ ನೌಕಾ ಸಂವಾದ ಐಒಎನ್‌ಎಸ್ ನೌಕಾ ಮುಖ್ಯಸ್ಥರ ಸಮಾವೇಶ ಜರುಗಲಿದೆ. ಕಾರ್ಯಕ್ರಮಕ್ಕೆ ವಿವಿಧ ರಾಷ್ಟ್ರಗಳ ನೌಕಾಪಡೆ ಮುಖ್ಯಸ್ಥರು ಆಗಮಿಸುವ ನಿರೀಕ್ಷೆ ಇದೆ. ಪ್ರಸ್ತುತ ನಡೆಯುತ್ತಿರುವ ಅಂತಾರಾಷ್ಟ್ರೀಯ ನೌಕಾ ವಿಮರ್ಶೆ ಮತ್ತು ಮಿಲನ್-೨೦೨೬ ಸಮರಾಭ್ಯಾಸಗಳ ನಡುವೆ ಈ ಕಾರ್ಯಕ್ರಮ ನಡೆಯುತ್ತಿರುವುದು ಅದರ ಕಾರ್ಯತಂತ್ರದ ಪ್ರಾಮುಖ್ಯತೆಯನ್ನು ಮತ್ತಷ್ಟು ಹೆಚ್ಚಿಸಿದೆ. ಸಮಾವೇಶದಲ್ಲಿ ನೌಕಾ ಸಿಬ್ಬಂದಿ ಮುಖ್ಯಸ್ಥರು, ಹಿಂದೂ ಮಹಾಸಾಗರ ನೌಕಾ ಸಂವಾದದ ಅಧ್ಯಕ್ಷತೆಯನ್ನು ರಾಯಲ್ ಥಾಯ್ ನೌಕಾಪಡೆಯಿಂದ ಸ್ವೀಕರಿಸಲಿದ್ದಾರೆ. ಈ ವೇದಿಕೆಯನ್ನು ಭಾರತ ೨೦೨೬ ರಿಂದ ೨೦೨೮ರ ಅವಧಿಗೆ ಮುನ್ನಡೆಸಲಿದೆ.

**********

ವಾಷಿಂಗ್ಟನ್ ಡಿಸಿಯಲ್ಲಿ ನಿನ್ನೆ ರಾತ್ರಿ ನಡೆದ ಮೊದಲ ಶಾಂತಿ ಮಂಡಳಿಯ ಉದ್ಘಾಟನಾ ಸಭೆಯು ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಸಭೆಯನ್ನುದ್ದೇಶಿಸಿ ಮಾತನಾಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಗಾಜಾದ ಪರಿಹಾರ ಪ್ಯಾಕೇಜ್‌ಗಾಗಿ ಮಂಡಳಿಯ ಸದಸ್ಯರಿಂದ ಒಟ್ಟು ೭ ಶತಕೋಟಿ ಅಮೆರಿಕ ಡಾಲರ್‌ಗಿಂತ ಹೆಚ್ಚಿನ ಮೊತ್ತದ ನೆರವಿನ ಬದ್ಧತೆಯನ್ನು ಘೋಷಿಸಿದ್ದಾರೆ. ಈ ಮಂಡಳಿಯು ಹಣಕಾಸಿನ ಸಮಗ್ರತೆ ಮತ್ತು ಪಾರದರ್ಶಕತೆ ತತ್ವಗಳಡಿಯಲ್ಲಿ ಕಾರ್ಯ ನಿರ್ವಹಿಸುವ ನಿರ್ಣಯಕ್ಕೆ ಅಧ್ಯಕ್ಷ ಟ್ರಂಪ್ ಸಹಿ ಹಾಕಿದರು. ಕಳೆದ ಅಕ್ಟೋಬರ್‌ನಲ್ಲಿ ಕದನವಿರಾಮ ಏರ್ಪಟ್ಟ ನಂತರ ಅಮೆರಿಕ ಮತ್ತು ಅದರ ಪಾಲುದಾರ ರಾಷ್ಟ್ರಗಳು ಗಾಜಾಗೆ ಬೃಹತ್ ಪ್ರಮಾಣದಲ್ಲಿ ಮಾನವೀಯ ನೆರವು ಕಲ್ಪಿಸುವಲ್ಲಿ ಯಶಸ್ವಿಯಾಗಿವೆ ಎಂದು ಇದೇ ಸಂದರ್ಭದಲ್ಲಿ ಅಧ್ಯಕ್ಷ ಟ್ರಂಪ್ ತಿಳಿಸಿದರು.

**********

ಇಂದು ವಿಶ್ವ ಸಾಮಾಜಿಕ ನ್ಯಾಯ ದಿನವನ್ನು ಆಚರಿಸಲಾಗುತ್ತಿದೆ. ಬಡತನ, ಲಿಂಗ ಅಸಮಾನತೆ ಮತ್ತು ನಿರುದ್ಯೋಗದಂತಹ ನಿರ್ಣಾಯಕ ಜಾಗತಿಕ ಸಮಸ್ಯೆಗಳನ್ನು ನಿಭಾಯಿಸಲು ಈ ದಿನವನ್ನು ಮೀಸಲಿಡಲಾಗಿದೆ. ಎಲ್ಲರಿಗೂ ನ್ಯಾಯ, ಮಾನವ ಹಕ್ಕುಗಳು ಮತ್ತು ಸಾಮಾಜಿಕ ರಕ್ಷಣೆಯ ಮೌಲ್ಯಗಳನ್ನು ಉತ್ತೇಜಿಸಲು ವಿಶ್ವಸಂಸ್ಥೆಯು ೨೦೦೭ ರಲ್ಲಿ ಈ ದಿನವನ್ನು ಆಚರಣೆಗೆ ತಂದಿತು.

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ರಾಷ್ಟ್ರೀಯ ಕಾನೂನು ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಇಂದು ಈ ದಿನವನ್ನು ಆಚರಿಸಲು ವಿಶೇಷ ಕಾರ್ಯಕ್ರಮವನ್ನು ಆಯೋಜಿಸುತ್ತದೆ. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣದ ರಾಜ್ಯ ಸಚಿವ ಬಿ.ಎಲ್. ವರ್ಮಾ ಸಂವಿಧಾನದ ಪೀಠಿಕೆಯ ವಾಚನವನ್ನು ಮುನ್ನಡೆಸಲಿದ್ದಾರೆ.

**********

ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಪುರುಷರ ಟಿ೨೦ ವಿಶ್ವಕಪ್ ಕ್ರಿಕೆಟ್‌ನ ಡಿ ಗುಂಪಿನ ಪಂದ್ಯದಲ್ಲಿ ಅಫ್ಘಾನಿಸ್ತಾನ ತಂಡ, ಕೆನಡಾವನ್ನು ೮೨ ರನ್‌ಗಳಿಂದ ಸೋಲಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಅಫ್ಘಾನಿಸ್ತಾನ ತಂಡವು ನಿಗದಿತ ೨೦ ಓವರ್‌ಗಳಲ್ಲಿ ೨೦೦ ರನ್‌ಗಳನ್ನು ಗಳಿಸಿತು, ೨೦೧ ರನ್ ಗಳ ಗುರಿ ಬೆನ್ನತ್ತಿದ ಕೆನಡಾ ೨೦ ಓವರ್ ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೧೮ ರನ್‌ಗಳನ್ನು ಗಳಿಸಲಷ್ಟೇ ಶಕ್ತವಾಯಿತು. ಅಫ್ಘಾನಿಸ್ತಾನ ಪರ ಮೊಹಮ್ಮದ್ ನಬಿ ೪ ವಿಕೆಟ್‌ಗಳನ್ನು ಪಡೆದರೆ, ನಾಯಕ ರಶೀದ್ ಖಾನ್ ೨ ವಿಕೆಟ್‌ಗಳನ್ನು ಪಡೆದರು. ಇಬ್ರಾಹಿಂ ಜದ್ರಾನ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಕೊಲಂಬೊದ ಆರ್ ಪ್ರೇಮದಾಸ ಕ್ರೀಡಾಂಗಣದಲ್ಲಿ ನಿನ್ನೆ ಸಂಜೆ ನಡೆದ ಬಿ ಗುಂಪಿನ ಪಂದ್ಯದಲ್ಲಿ ಜಿಂಬಾಬ್ವೆ ಶ್ರೀಲಂಕಾ ವಿರುದ್ಧ ಆರು ವಿಕೆಟ್‌ಗಳ ಜಯ ಸಾಧಿಸಿತು. ಇದಕ್ಕೂ ಮೊದಲು, ಮಧ್ಯಾಹ್ನ ಈಡನ್ ಗಾರ್ಡನ್ಸ್‌ನಲ್ಲಿ ನಡೆದ ಸಿ ಗುಂಪಿನ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡವು ಇಟಲಿಯನ್ನು ೪೨ ರನ್‌ಗಳಿಂದ ಸೋಲಿಸಿತು. ಇಂದು ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಬಿ ಗುಂಪಿನ ಕೊನೆಯ ಲೀಗ್ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡವು, ಒಮಾನ್ ವಿರುದ್ಧ ಸೆಣಸಲಿದೆ. ಈ ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ನಾಳೆಯಿಂದ ಸೂಪರ್ ೮ರ ಘಟ್ಟದ ಪಂದ್ಯಗಳು ಆರಂಭವಾಗಲಿವೆ.

**********

ಲಖನೌನ ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ರಣಜಿ ಟ್ರೋಫಿ ಕ್ರಿಕೆಟ್‌ನಲ್ಲಿ ಕರ್ನಾಟಕ ೧೧ ವರ್ಷಗಳ ನಂತರ ಫೈನಲ್‌ಗೆ ಲಗ್ಗೆಇಟ್ಟಿದೆ. ಎರಡನೇ ಸೆಮಿಫೈನಲ್‌ನಲ್ಲಿ ಐದನೇ ಮತ್ತು ಕೊನೆಯ ದಿನದಂದು ಕರ್ನಾಟಕ ಮತ್ತು ಉತ್ತರಾಖಂಡ್

ನಡುವಿನ ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿತು. ಆದಾಗ್ಯೂ, ಕರ್ನಾಟಕ ತಂಡವು ಮೊದಲ ಇನ್ನಿಂಗ್ಸ್‌ನಲ್ಲಿ ಬೃಹತ್ ಮುನ್ನಡೆ ಪಡೆದಿದ್ದರಿಂದ ಫೈನಲ್‌ಗೆ ತಲುಪಲು ಸಾಧ್ಯವಾಯಿತು. ದೇವದತ್ ಪಡಿಕ್ಕಲ್ ನೇತೃತ್ವದ ಕರ್ನಾಟಕ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೭೩೮ ರನ್‌ಗಳನ್ನು ಗಳಿಸಿದರೆ, ಉತ್ತರಾಖಂಡ ಕೇವಲ ೧೩೩ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ಎರಡನೇ ಇನ್ನಿಂಗ್ಸ್‌ನಲ್ಲಿ, ಕರ್ನಾಟಕ ೩೧೩ ರನ್‌ಗಳನ್ನು ಗಳಿಸಿತು. ನಂತರ ಉತ್ತರಾಖಂಡ್ ಐದನೇ ಮತ್ತು ಕೊನೆಯ ದಿನದ ಅಂತ್ಯಕ್ಕೆ ೮ ವಿಕೆಟ್‌ಗಳಿಗೆ ೧೮೦ ರನ್‌ಗಳಿಸಿತ್ತು. ಪರಿಣಾಮವಾಗಿ ಪಂದ್ಯ ಡ್ರಾಗೊಂಡಿತು.ಮೊದಲ ಇನ್ನಿಂಗ್ಸ್‌ನಲ್ಲಿ ದ್ವಿಶತಕ ಸಿಡಿಸಿದ ದೇವದತ್ ಪಡಿಕ್ಕಲ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

*****END*****